**ಸಾಕ್ಷಿಗೆ ದಿನಾಂಕ 03-03-2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

ಮುಖ್ಯ ವಿಚಾರಣೆ: ಅರ್ಜಿದಾರರ ಪರ ಶ್ರೀಮತಿ ಎಸ್ ವಿ ವಕೀಲರಿಂದಃ

1. ನಾನು ಈ ಪ್ರಕರಣದಲ್ಲಿ ಪ್ರತ್ಯಕ್ಷ ಸಾಕ್ಷಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಸಂಬಂಧಿಸಿದಂತೆ, ನಾನು ಈ ದಿನ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ. ಅದನ್ನು ನಾನು ಓದಿ ತಿಳಿದುಕೊಂಡು ಸಹಿಮಾಡಿರುತ್ತೇನೆ.

2. ನಾನು ಈ ಪ್ರಕರಣದಲ್ಲಿ ತೆಗೆದುಕೊಂಡಿರುವ ನಿಲುವಿಗೆ ಸಂಬಂಧಿಸಿದಂತೆ ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ. ಸಾಕ್ಷಿಹಾಜರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ.:

| | |
|---|---|
| ನಿ.ಪಿ 17 | ಆಧಾರ್ ಕಾರ್ಡ್‌ನ ನೋಟರಿಕೃತ ದಾಖಲೆ (ಮೂಲದಾಖಲೆಯನ್ನು ಪರಿಶೀಲಿಸಿ ಹಿಂದಿರುಗಿಸಲಾಯಿತು.). |

**<u>ಪಾಟೀಸವಾಲುಃ</u> 1 ನೇ ಎದುರುದಾರರ ಪರ ಶ್ರೀ ಹೆಚ್ ಎ ಕೆ ಎಸ್ ವಕೀಲರಿಂದಃ**

1. ಈ ಅಪಘಾತಕ್ಕೆ ಸಂಬಂಧಿಸಿದಂತೆ ಅಪಘಾತದ ದಿನವೇ ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ. ಸದರಿ ಹೇಳಿಕೆಯ ಪ್ರತಿಯನ್ನು ಈ ನ್ಯಾಯಾಲಯದಲ್ಲಿ ಹಾಜರುಪಡಿಸಿದ್ದಾರೊ ಇಲ್ಲವೋ ಎಂದು ನನಗೆ ಗೊತ್ತಿಲ್ಲ. ಗೋವಿಂದರಾಜು ಮತ್ತು ಸಂತೋಷ್ ಎನ್ನುವವರ ಸಾಕ್ಷಿದಾರರ ಹೇಳಿಕೆಗಳನ್ನು ಮಾತ್ರ ನಿಪಿ.4 ಮತ್ತು 5 ರಂತೆ ಹಾಜರುಪಡಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನನ್ನ ಹೇಳಿಕೆಯನ್ನು ಅರ್ಜಿದಾರರು ಈ ನ್ಯಾಯಾಲಯಕ್ಕೆ ಹಾಜರುಪಡಿಸದೇ ಇರುವುದರಿಂದ ನಾನು ಯಹಾವುದೇ ಹೇಳಿಕೆಯನ್ನು ಪೊಲೀಸರ ಮುಂದೆ ನೀಡಿರುವುದಿಲ್ಲ ಎಂದರೆ ಸರಿಯಲ್ಲ.

2. ಅಪಘಾತದಲ್ಲಿ ಒಳಗೊಂಡ ಟ್ರಾಕ್ಟರ್ ಮತ್ತು ಟ್ಯಾಂಕರ್ ಗಳ ನಂಬರುಗಳು ಕೆಎ-03-ಎ-0081 ಮತ್ತು ಕೆಎ-03-ಎ-0082 ಇರುತ್ತವೆ. ನಾನು ಅಪಘಾತವನ್ನು ಕಣ್ಣಾರೆ ನೋಡಿರುತ್ತೇನೆ. ಸಾಕ್ಷಿಗೆ ನಿಪಿ.7 ರ ಛಾಯಾಚಿತ್ರಗಳನ್ನು ತೋರಿಸಿ ವಾಹನದ ನಂಬರ್ ಗಳನ್ನು ತೋರಿಸಲು ಕೇಳಿದಾಗ ಸದರಿ ದಾಖಲೆಯಲ್ಲಿ ವಾಹನದ ನಂಬರ್ ಕಾಣುತ್ತಿಲ್ಲ ಎಂದು ನುಡಿಯುತ್ತಾರೆ. ಪೊಲೀಸ್ ದಾಖಲೆಗಳಾದ ಎಫ್.ಐ.ಆರ್, ದೂರು, ದೋಷಾರೋಪಣಾಪಟ್ಟಿ ಮತ್ತು ನಿಪಿ.10 ರಲ್ಲಿ ಎಲ್ಲಯೂ ವಾಹನ ಸಂಖ್ಯೆ ಕೆಎ-03-ಎ-0081 ಮತ್ತು ಕೆಎ-03-ಎ-0082 ಎಂದು ನಮೂದಾಗಿರುವುದಿಲ್ಲ ಎಂದರೆ ನನಗೆ ಗೊತ್ತಿಲ್ಲ. ಅಪಘಾತದ ಸಮಯದಲ್ಲಿ ಸ್ಥಳದಲ್ಲಿ ನಾನು ಇರದೇ ಇದ್ದರೂ ಸಹ ಅರ್ಜಿದಾರರಿಗೆ ಅನುಕೂಲವಾಲೆಂದು ಸುಳ್ಳು ಪ್ರಮಾಣಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಎರಡನೇ ಎದುರುದಾರರು ಮತ್ತು ಅವರ ಪರ ವಕೀಲರು ಗೈರು ಹಾಜರು, ಆದ್ದರಿಂದ ಅವರ ಪಾಟೀ ಸವಾಲು ಇರುವುದಿಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಮರು-ವಿಚಾರಣೆಃ ಇಲ್ಲ.**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**